**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು**

**ನ್ಯಾಯಾಲಯ, ದೇವದುರ್ಗ.**

**CC No.580/2022**

**CW - 9 PW-10**

| | | |
|---|---|---|
| ಸಾಕ್ಷಿದಾರನ ಹೆಸರು | ಃ | ಅಮರೇಶ |
| ತಂದೆ | ಃ | ಯಲ್ಲಪ್ಪ |
| ವಯಸ್ಸು | ಃ | 34 |
| ಉದ್ಯೋಗ | ಃ | ಒಕ್ಕಲುತನ |
| ವಾಸಸ್ಥಳ | ಃ | ಬಿ.ಆರ್. ಗುಂಡಾ |
| ಪ್ರಮಾಣಿಕರಿಸಿದ ದಿನಾಂಕ | ಃ | **20-02-2026** |

---

**ಮುಖ್ಯ ವಿಚಾರಣೆ:- ಮಾನ್ಯ ಸ.ಸ.ಅ ರವರಿಂದ**

ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿವುರುದಿಲ್ಲ.

**(**ಈ ಹಂತದಲ್ಲಿ ಮಾನ್ಯ ಸ**.**ಸ**.**ಅ ರವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು**.)**

**ಪಾಟೀ ಸವಾಲು:- ಮಾನ್ಯ ಸ.ಸ.ಅ ರವರಿಂದ**

ನಾಗಲಾಪೂರ್ ಡಿ. ಗ್ರಾಮದ ಸರ್ವೆ ನಂ.20 ಮತ್ತು 32 ರಲ್ಲಿ ಆರೋಪಿಗಳು ಸರ್ಕಾರಿ ಜಮೀನನ್ನು ಅತಿಕ್ರಮಣ ಮಾಡಿ ಸಾಗುವಳಿ ಮಾಡಿದ್ದು ಇರುತ್ತದೆ ಹಾಗೂ ಸದರಿ ಆರೋಪಿಗಳಿಗೆ ತಹಶೀಲ್ದಾರ್ ಮತ್ತು ಆರ್.ಐ ರವರು ದಿನಾಂಕ 25-06-2022 ರಿಂದ 01-07-2022 ರವರೆಗೆ ಕಾಲಾವಕಾಶ ನೀಡಿದರು ಜಮೀನು ತೆರವು ಮಾಡಿರುವುದಿಲ್ಲ. ಸದರಿ ಸರ್ಕಾರಿ ಜಮೀನಿನಲ್ಲಿ ಆರೋಪಿತರು ತಲಾ 03 ಎಕರೆ ಜಮೀನನ್ನು ಅತಿಕ್ರಮಣ ಮಾಡಿರುತ್ತಾರೆ ಎಂದು ಪೊಲೀಸರಿಗೆ ನಿಪಿ-8 ರಂತೆ ಹೇಳಿಕೆ ನೀಡಿರುತ್ತೇನೆ ಅಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲು:- ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.**

**ಮರುವಿಚಾರಣೆ:- ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)

ಓ.ಹೇ.ಕೇ.ಸರಿ.ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,
ದೇವದುರ್ಗ.